# ಬೆಳವಣಿಗೆಗೆ ಬೌದ್ಧಿಕ ಅರಿವು ಮುಖ್ಯ




ನಗರದ ಆರ್.ವಿ. ತಾಂತ್ರಿಕ ಕಾಲೇಜಿನಲ್ಲಿ ನಡೆದ 6ನೇ ಘಟಿಕೋತ್ಸವ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷ ಪದ್ಮಶ್ರೀ ಪುರಸ್ಕೃತ ಎ.ಎಸ್. ಕಿರಣ್‌ಕುಮಾರ್ ಪದವಿ ಪ್ರದಾನ ಮಾಡಿದರು. ಆರ್.ವಿ. ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ. ಎಂ.ಕೆ.ಪಾಂಡುರಂಗಶೆಟ್ಟಿ, ಪ್ರಾಂಶುಪಾಲ ಡಾ. ಕೆ.ಎನ್. ಸತ್ಯನಾರಾಯಣ ಮುಂತಾದವರು ಉಪಸ್ಥಿತರಿದ್ದರು.

ಬೆಂಗಳೂರು, ಜು. 22 – ಸರ್ವತೋಮುಖ ಬೆಳವಣಿಗೆಯಲ್ಲಿ ಬೌದ್ಧಿಕ ಅರಿವು ಪ್ರಮುಖ ಪಾತ್ರ ನಿರ್ವಹಿಸುತ್ತದೆ ಎಂದು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ಅಧ್ಯಕ್ಷ ಪದ್ಮಶ್ರೀ ಪುರಸ್ಕೃತ ಎ.ಎಸ್. ಕಿರಣ್‌ಕುಮಾರ್ ತಿಳಿಸಿದರು.

ಆರ್.ವಿ. ತಾಂತ್ರಿಕ ಕಾಲೇಜಿನಲ್ಲಿ ನಡೆದ 6ನೇ ಘಟಿಕೋತ್ಸವ ಉದ್ಘಾಟಿಸಿ ಮಾತನಾಡಿದ ಅವರು, ಸಾಹಿತ್ಯ ತರ್ಕಶಾಸ್ತ್ರ ಹಾಗೂ ಇತಿಹಾಸಗಳ ಅರಿವು ಹೆಚ್ಚಿಸುವಲ್ಲಿ ಮಹತ್ವದ ಕೊಡುಗೆ ನೀಡುತ್ತವೆ ಎಂದು ಅಭಿಪ್ರಾಯಪಟ್ಟರು.

ವಿಜ್ಞಾನ ಹಾಗೂ ತಂತ್ರಜ್ಞಾನದಲ್ಲಿನ ಆವಿಷ್ಕಾರಗಳಿಗೆ ನಿಸರ್ಗವೇ ಪ್ರೇರಣೆಯಾಗಿದ್ದು ಇವುಗಳು ಆರೋಗ್ಯ, ರಕ್ಷಣಾ ವ್ಯವಸ್ಥೆ, ಶಿಕ್ಷಣ, ಮನರಂಜನೆ, ಸಂವಹನ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿನ ಮಹತ್ವದ ಬದಲಾವಣೆಗೆ ಕಾರಣವಾಗಿವೆ. ಜಾಗತಿಕ ತಾಪಮಾನ ಏರಿಕೆ, ಹಿಮ ಪ್ರವಾಹ, ಸಮುದ್ರ ಮಟ್ಟದ ಏರಿಕೆ, ವಾಯು ಮಾಲಿನ್ಯ, ಸಾಗರದ ಆಮ್ಲೀಕರಣ, ವನ್ಯಜೀವಿಗಳ ಪ್ರಬೇಧ, ಅಂತರ್ಜಲ ಮಲಿನತೆ ಮುಂತಾದವುಗಳಿಂದ ಉಂಟಾಗುವ ದುಷ್ಪರಿಣಾಮಗಳ ಮುಂದಾಲೋಚನೆ ಇಲ್ಲದೆ ತಂತ್ರಜ್ಞಾನ ಆವಿಷ್ಕಾರದಿಂದ ಉಂಟಾಗಿದೆ ಎಂದು ಅಭಿಪ್ರಾಯಪಟ್ಟರು.

ಆರ್.ವಿ.ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಎಂ.ಕೆ.ಪಾಂಡುರಂಗಶೆಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿ ನಮ್ಮ ಸಂಸ್ಥೆಗಳಲ್ಲಿ ವಿದ್ಯಾಭ್ಯಾಸ ಮಾಡುವುದು ಮಾತ್ರವಲ್ಲದೇ ತಾನು ವಿದ್ಯಾಭ್ಯಾಸ ಮಾಡಿದ ಕ್ಷೇತ್ರಗಳಲ್ಲಿ ಉನ್ನತಿ ಸಾಧಿಸಿ ದೇಶ ಸೇವೆಗೆ ಸಮರ್ಪಕವಾದ ಸೇವೆ ಸಲ್ಲಿಸಲು ಕರೆ ನೀಡಿದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.